# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1] | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 536 |
| 2] | ಮಾನ್ಯ ಸದಸ್ಯರ ಹೆಸರು | : | ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3] | ಉತ್ತರಿಸುವ ದಿನಾಂಕ | : | 16/09/2021 |
| 4] | ಉತ್ತರಿಸುವ ಸಚಿವರು | : | ಗೃಹ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯಲ್ಲಿ ಪೊಲೀಸ್ ತರಬೇತಿ ಕೇಂದ್ರವನ್ನು ಆರಂಭಿಸುವ ಯೋಜನೆಯ ಸ್ಥಿತಿಗತಿ ಏನು; | ಬೀದರ್ ಜಿಲ್ಲೆಯ ಮನ್ನಳ್ಳಿ ಗ್ರಾಮ ಸರ್ವೆ ನಂ: 168ರಲ್ಲಿ 99 ಎಕರೆ ಜಮೀನು ಮಹಿಳಾ ಪೊಲೀಸ್ ತರಬೇತಿ ಶಾಲೆಗಾಗಿ ಜಿಲ್ಲಾಧಿಕಾರಿಗಳು ಬೀದರ್ ಜಿಲ್ಲೆ ರವರ ಸಂ: ಕಂ/ಎಲ್.ಎನ್.ಡಿ/ಸಿ.ಆರ್–20/2012–13, ದಿನಾಂಕ: 06/12/2013ರಲ್ಲಿ ಮಂಜೂರಿಸಿ ಆದೇಶ ಹೊರಡಿಸಿರುತ್ತಾರೆ. ದಿನಾಂಕ: 24/01/2014 ರಂದು ಸದರಿ 99 ಎಕರೆ ಜಮೀನನ್ನು ಇಲಾಖೆಯ ವಶಕ್ಕೆ ಸ್ವಾಧೀನ ಪಡಿಸಿಕೊಳ್ಳಲಾಗಿರುತ್ತದೆ. ಸದರಿ ಜಮೀನು ಇಲಾಖೆಯ ವಶದಲ್ಲಿರುತ್ತದೆ. ಅನುದಾನ ಲಭ್ಯತೆಯನುಸಾರ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು. |
| ಆ) | ಬೀದರ್ ತಾಲ್ಲೂಕಿನ ಮನ್ನಳಿ ಗ್ರಾಮದ ಬಳಿ ತರಬೇತಿ ಕೇಂದ್ರವನ್ನು ಆರಂಭಿಸಲು ಸರ್ಕಾರ ಜಮೀನು ಗುರುತಿಸಿದೆಯೇ? ಪೊಲೀಸ್ ತರಬೇತಿ ಕೇಂದ್ರವನ್ನು ಪ್ರಾರಂಭಿಸುವ ಪ್ರಸ್ತಾವನೆ ನೆನೆಗುದಿಗೆ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | |
| ಇ) | ಬೀದರ್ ಜಿಲ್ಲೆಯಲ್ಲಿ ಹೊಸದಾಗಿ ಪೊಲೀಸ್ ಠಾಣೆಗಳನ್ನು ನಿರ್ಮಿಸಲು ಪ್ರಸ್ತಾವನೆ ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ ಯಾವಾಗ ಪ್ರಾರಂಭಿಸಲಾಗುವುದು? | ಸ್ವಂತ ಕಟ್ಟಡಗಳಿಲ್ಲದ ನೂರು ಪೊಲೀಸ್ ಠಾಣೆಗಳಿಗೆ ಮುಂದಿನ ಎರಡು ವರ್ಷಗಳಲ್ಲಿ ರೂ.200.00 ಕೋಟಿ ವೆಚ್ಚದಲ್ಲಿ ಹೊಸ ಸ್ವಂತ ಕಟ್ಟಡ ನಿರ್ಮಾಣ ಮಾಡುವ ಸಂಬಂಧ ಆದೇಶ ಸಂಖ್ಯೆ: ಹೆಚ್‌ಡಿ 41 ಪಿಬಿಎಲ್ 2021, ದಿನಾಂಕ: 13/7/2021ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಿದ್ದು, 2021–22ನೇ ಸಾಲಿನಲ್ಲಿ ರೂ.25.00 ಕೋಟಿಗಳ ಅನುದಾನ ಒದಗಿಸಿದ್ದು, ಪ್ರಸ್ತುತ ಮೊದಲನೇ ಹಂತದಲ್ಲಿ ಬೀದರ್ ಜಿಲ್ಲೆಯ ಮನ್ನಳ್ಳಿ ಪೊಲೀಸ್ ಠಾಣೆಗೆ ರೂ. 225.61 ಲಕ್ಷಗಳ ವೆಚ್ಚದಲ್ಲಿ ಸ್ವಂತ ಕಟ್ಟಡ ನಿರ್ಮಾಣ ಮಾಡುವ ಸಂಬಂಧ ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. |

**ಸಂಖ್ಯೆ: ಹೆಚ್‌ಡಿ 136 ಪಿಓಪಿ 2021**

(ಆರಗ ಜ್ಞಾನೇಂದ್ರ)
ಗೃಹ ಸಚಿವರು.